# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

---

## ವಾರ್ಡ್ ನಂ.71 : ಹೆಗ್ಗನಹಳ್ಳಿ

---

**ದಿನಾಂಕ: 05.01.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶಿವಲಿಂಗಯ್ಯ.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 5 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 6 | ವಿ ಲೋಕೇಶ್ ಗೌಡ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- <u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>
- ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಶಾಲೆಗಳು ಪುನರಾರಂಭವಾಗಿದ್ದು, ಇಲ್ಲಿಯವರೆಗೆ ಸ್ಯಾನಿಟೈಸ್ ಮಾಡಲು ಮನವಿ ಮಾಡಿದ್ದು, ಸದರಿ ಶಾಲೆಗಳಿಗೆ ಸ್ಯಾನಿಟೈಸ್ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

- <u>ಕೋವಿಡ್–19, ಸಾಂಕ್ರಾಮಿಕ ರೋಗದ ಬಗ್ಗೆ</u>

- ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಮಾತಾನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ಪ್ರತಿ ದಿನ 180–200 ಟೆಸ್ಟ್ ನಡೆಸಲಾಗಿದ್ದು, ಇವುಗಳಲ್ಲಿ ಬೆರಳಣಿಕೆ ಸಂಖ್ಯೆಯಲ್ಲಿ ಸೋಂಕಿತರು ಕಂಡುಬರುತ್ತಿದ್ದು, ಸಾರ್ವಜನಿಕರಲ್ಲಿ ಹಾಗೂ ಬೀದಿ ವ್ಯಾಪಾರಿಗಳಲ್ಲಿ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- **<u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>**

  - ಮಂಜುನಾಥ್ ಡಿ.ಎಸ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಅಂದಾಜು 180 ಟನ್‌ಗಳಷ್ಟು ಡಾಂಬರು ಮಿಕ್ಸ ಬೇಕಾಗಿರುತ್ತದೆ ಎಂದು ತಿಳಿಸಿದರು.

- **ಇನ್ನಿತರ ಸಮಸ್ಯೆಗಳ ಬಗ್ಗೆ:**

  <u>BBMP SAHAYA APP:</u>

  - ಮಂಜುನಾಥ್ ಡಿ.ಎಸ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
  - ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
  - ಮಂಜುನಾಥ್ ಡಿ.ಎಸ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ವೈಯಕ್ತಿಕ ಉಚಿತ ಒಂಟಿ ಮನೆ ನಿರ್ಮಾಣ ಕಲ್ಯಾಣ ಕಾರ್ಯಕ್ರಮದಡಿ ಶ್ರೀ ಬಿ.ಕೆ.ಸುರೇಶ್ ಬಿನ್ ಕೆಂಚೇಗೌಡ ಇವರಿಗೆ ಮನೆ ನಿರ್ಮಿಸಿಕೊಳ್ಳಲು ಜಾಬ್‌ಕೋಡ್ 071-20-000109 ರಲ್ಲಿ ಅನುದಾನ ನಿಗದಿಯಾಗಿದ್ದು, ಕಾರ್ಯಾದೇಶ ನೀಡಲಾಗಿರುತ್ತದೆ.

    ಆದರೆ ದಿನಾಂಕ:24/11/2020 ರಂದು ಮಾನ್ಯ ಶಾಸಕರು ಪತ್ರವನ್ನು ನೀಡಿದ್ದು, ಫಲಾನುಭವಿಯಾದ ಶ್ರೀ ಬಿ.ಕೆ.ಸುರೇಶ್‌ರವರು ಕೆಲವು ಕೌಟುಂಬಿಕ ಕಾರಣಗಳಿಂದ ಕುಟುಂಬದಿಂದ ಹೊರಗೆ ಉಳಿದಿದ್ದು, ಸದರಿಯವರ ಹೆಸರಿಗೆ ಮಂಜೂರಾಗಿದ್ದ ಸಹಾಯಧನವನ್ನು ಅವರ ಧರ್ಮಪತ್ನಿ ಶ್ರೀಮತಿ ಮಂಜುಳ, ನಂ.365/1, 7ನೇ ಮೇನ್, ಮಾರುತಿನಗರ ಇವರಿಗೆ ನೀಡುವಂತೆ ಕೋರಿರುವುದನ್ನು ಸಭೆಯಲ್ಲಿ ಪ್ರಸ್ತಾಪಿಸಿದರು.

    - ಇದಕ್ಕೆ ಮಾನ್ಯ ನೋಡಲ್ ಅಧಿಕಾರಿರವರವನ್ನೊಳಗೊಂಡಂತೆ ಈ ಬಗ್ಗೆ ಶ್ರೀ ಬಿ.ಕೆ.ಸುರೇಶ್‌ರವರಿಂದ ಲಿಖಿತ ಒಪ್ಪಿಗೆಯನ್ನು ಪಡೆದು ಅಗತ್ಯ ಕ್ರಮ ಕೈಗೊಂಡು ಅವರ ಧರ್ಮಪತ್ನಿಯಾದ ಶ್ರೀಮತಿ ಮಂಜುಳರವರಿಗೆ ಸಹಾಯ ಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್-71**

**ಪ್ರತಿಯನ್ನು:**

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ